ಕರ್ನಾಟಕ ವಿಧಾನ ಪರಿಷತ್

1. ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 631
2. ಸದಸ್ಯರ ಹೆಸರು : ಶ್ರೀ ಎಂ.ನಾರಾಯಣಸ್ವಾಮಿ
3. ಉತ್ತರಿಸುವ ದಿನಾಂಕ : 04.03.2021

ಕ್ರ. ಸಂ.	ಪ್ರಶ್ನೆ	ಉತ್ತರಗಳು
(ಅ)	ತಮಿಳುನಾಡು ನಿಗದಿಗಿಂತ ಹೆಚ್ಚು ನೀರನ್ನು ಅಕ್ರಮವಾಗಿ ಬಳಸಿಕೊಂಡು ನದಿ ಜೋಡಣೆ ಯೋಜನೆಯನ್ನು ಪ್ರಾರಂಭ ಮಾಡಲು ಹೊರಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಹೌದು
(ಆ)	ಬಂದಿದ್ದಲ್ಲಿ, ಇದನ್ನು ತಕ್ಷಣ ನಿಲ್ಲಿಸಲು ಸರ್ಕಾರ ಕೈಗೊಂಡಿರುವ ಹಾಗೂ ಕೈಗೊಳ್ಳಲಿರುವ ಕಾನೂನು ಕ್ರಮಗಳೇನು? (ಸಂಪೂರ್ಣ ವಿವರ ನೀಡುವುದು)	ತಮಿಳುನಾಡು ರಾಜ್ಯವು ಕೇಂದ್ರ ಸರ್ಕಾರಕ್ಕೆ ಸದರಿ ಯೋಜನೆಗೆ ತಾತ್ವಿಕ ಅನುಮೋದನೆ ಹಾಗೂ ಆರ್ಥಿಕ ನೆರವು ಕೋರಿ ಬರೆದಿರುವ ದಿನಾಂಕ:05.01.2021ರ ಪತ್ರವು ಕಾವೇರಿ ಜಲ ನಿರ್ವಹಣಾ ಪ್ರಾಧಿಕಾರದಿಂದ ರಾಜ್ಯದ ಅಭಿಪ್ರಾಯಕ್ಕಾಗಿ ಸ್ವೀಕೃತವಾಗಿದೆ. ತಮಿಳುನಾಡಿನ ಕೈಗೊಳ್ಳುತ್ತಿರುವ ಕಾವೇರಿ-ದಕ್ಷಿಣ ವೆಲ್ಲಾರ್ ಯೋಜನೆಯ ಬಗ್ಗೆ ರಾಜ್ಯ ಸರ್ಕಾರದಿಂದ ಕೇಂದ್ರ ಜಲ ಸಂಪನ್ಮೂಲ ಸಚಿವಾಲಯ, ಕೇಂದ್ರ ಜಲ ಆಯೋಗ ಹಾಗೂ ಕಾವೇರಿ ಜಲ ನಿರ್ವಹಣಾ ಪ್ರಾಧಿಕಾರಕ್ಕೆ ಬರೆದಿರುವ ದಿನಾಂಕ:17.02.2021ರ ಪತ್ರಗಳಲ್ಲಿ ರಾಜ್ಯದ ಆಕ್ಷೇಪಣೆಯನ್ನು ತಿಳಿಸಲಾಗಿದೆ. ತಮಿಳುನಾಡಿನ ಸದರಿ ಯೋಜನೆಯು ಕಾನೂನು ಹಾಗೂ ಇತರೆ ಅಂಶಗಳಿಗೆ ವಿರುದ್ಧವಾಗಿದ್ದು, ಯಾವುದೇ ತೀರುವಳಿ ನೀಡದಂತೆ ಮತ್ತು ರಾಷ್ಟ್ರೀಯ ಯೋಜನೆಯೆಂದು ಘೋಷಿಸದಿರುವಂತೆ ಕೋರಲಾಗಿದೆ. ಮಾನ್ಯ ಮುಖ್ಯಮಂತ್ರಿಗಳು ಸನ್ಮಾನ್ಯ ಪ್ರಧಾನ ಮಂತ್ರಿಗಳಿಗೆ ಹಾಗೂ ಕೇಂದ್ರ ಜಲ ಶಕ್ತಿ ಸಚಿವರಿಗೆ ದಿನಾಂಕ:01.03.2021 ರಂದು ಬರೆದಿರುವ ಪತ್ರದಲ್ಲಿ ತಮಿಳುನಾಡು ರಾಜ್ಯವು ಕೈಗೊಂಡಿರುವ ಯೋಜನೆಯ ಬಗ್ಗೆ ರಾಜ್ಯದ ಆಕ್ಷೇಪಣೆಯನ್ನು ತಿಳಿಸಿ, ಸದರಿ ಯೋಜನೆಗೆ ಕೇಂದ್ರ ಸರ್ಕಾರವು ತೀರುವಳಿ ನೀಡಬಾರದೆಂದು ಹಾಗೂ ಯೋಜನೆಯನ್ನು ಮುಂದುವರೆಸದಂತೆ ತಮಿಳುನಾಡು ರಾಜ್ಯಕ್ಕೆ ನಿರ್ದೇಶನ ನೀಡುವಂತೆ ಕೋರಲಾಗಿದೆ. ಸದರಿ ಯೋಜನೆಯ ಬಗ್ಗೆ ರಾಜ್ಯವು ತೆಗೆದುಕೊಳ್ಳಬೇಕಾಗಿರುವ ಕ್ರಮಗಳ ಬಗ್ಗೆ ದಿನಾಂಕ:21.02.2021ರಂದು ಜಲ ಸಂಪನ್ಮೂಲ ಸಚಿವರು ನವದೆಹಲಿಯಲ್ಲಿ ಕಾನೂನು ಮತ್ತು ತಾಂತ್ರಿಕ ಪರಿಣಿತರೊಂದಿಗೆ ಹಾಗೂ ದಿನಾಂಕ:26.02.2021ರಂದು ಬೆಂಗಳೂರಿನಲ್ಲಿ ಜಲ ಸಂಪನ್ಮೂಲ ಸಚಿವರು ಹಾಗೂ ಗೃಹ ಮತ್ತು ಕಾನೂನು, ಸಂಸದೀಯ ಮತ್ತು ಶಾಸನಾ ರಚನೆಯ ಇಲಾಖಾ ಸಚಿವರು ಕಾನೂನು ಹಾಗೂ ತಾಂತ್ರಿಕ ತಂಡದೊಂದಿಗೆ ಕೂಲಂಕಷವಾಗಿ ಚರ್ಚಿಸಿರುತ್ತಾರೆ.

		ತಮಿಳುನಾಡು ರಾಜ್ಯವು ಕಾವೇರಿ ನ್ಯಾಯಾಧಿಕರಣದ ತೀರ್ಪಿನ ಉಲ್ಲಂಘನೆಯಾಗಿ ಕಾವೇರಿ ಕಣಿವೆಯ ಹೆಚ್ಚುವರಿ ನೀರಿನ ಬಳಕೆಗಾಗಿ ಯೋಜಿಸಿರುವ ಕಾವೇರಿ-ವೆಲ್ಲಾರ್ ಯೋಜನೆಯನ್ನು ಕೈಗೊಳ್ಳದಂತೆ ಕ್ರಮವಹಿಸುವ ನಿಟ್ಟಿನಲ್ಲಿ, ರಾಜ್ಯವು ಕಾನೂನಾತ್ಮಕವಾಗಿ ಹಾಗೂ ಅಗತ್ಯವಿರುವ ಎಲ್ಲಾ ಕ್ರಮಗಳನ್ನು ಕೈಗೊಳ್ಳುವ ಕುರಿತು ಕಾನೂನು ತಂಡದೊಂದಿಗೆ ಸಮಾಲೋಚಿಸುತ್ತಿದ್ದು, ಕಾವೇರಿ ಕಣಿವೆಯಲ್ಲಿನ ರಾಜ್ಯದ ಹಿತಾಸಕ್ತಿಯನ್ನು ಕಾಪಾಡಲು ಕ್ರಮವಹಿಸಲಾಗುತ್ತಿದೆ.

ಸಂಖ್ಯೆ: ಜಸಂಇ 11 ಕಾವಿಇ 2021

ಬಿ.ಎಸ್.

(ಬಿ.ಎಸ್. ಯಡಿಯೂರಪ್ಪ)

ಮುಖ್ಯಮಂತ್ರಿ